ಅಧ್ಯಕ್ಷರು : ಮಾನ್ಯ ವೈ. ರಾಮಕೃಷ್ಣರವರಿಗೆ ಇಂಗ್ಲೀಷ್‌ನಲ್ಲಿ ಹೇಳಿದರೆ ಸಾಕು. He is very good at English.

ಶ್ರೀ ವೈ. ರಾಮಕೃಷ್ಣ : ಮಾನ್ಯ ಮುಖ್ಯಮಂತ್ರಿಗಳು ಏನು ಹೇಳಿದ್ದಾರೆ ಅದನ್ನು ನಾನು ಒಪ್ಪುತ್ತೇನೆ.

Mr. Speaker : I think we will close this.

ನಿಯಮ 357ರ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

ಉಳ್ಳಾಳ ಕ್ಷೇತ್ರದ ಬೊಳಿಯೂರು ಗ್ರಾಮ ಪಂಚಾಯಿತಿ ಅಧ್ಯಕ್ಷರ ನೇಮಕದಲ್ಲಿ ವಿಳಂಬ

ಅಧ್ಯಕ್ಷರು : ಶ್ರೀ ಕೆ. ಜಯರಾಮ ಶೆಟ್ಟಿಯವರು ಉಳ್ಳಾಳ ಕ್ಷೇತ್ರದ ಬೊಳಿಯೂರು ಗ್ರಾಮಪಂಚಾಯಿತಿ ಅಧ್ಯಕ್ಷರ ನೇಮಕ ನಿಧನವಾಗಿದೆ. ಅದಕ್ಕೆ ಗ್ರಾಮೀಣಾಭಿವೃದ್ಧಿ ಸಚಿವರು ಉತ್ತರ ಹೇಳಿ.

ಶ್ರೀ ಕೆ. ಜಯರಾಮ ಶೆಟ್ಟಿ : ಮಾನ್ಯ ಅಧ್ಯಕ್ಷರೇ, ಪರಿಶಿಷ್ಟ ಪಂಗಡದ ಮನೆ ಇರುವುದು ಒಂದೇ. ಸ್ವಾಭಾವಿಕವಾಗಿ ಅಲ್ಲಿ ಮಹಿಳೆ ಪರಿಶಿಷ್ಟ ಪಂಗಡದ ಮಹಿಳೆ ಪಂಚಾಯಿತಿ ಅಧ್ಯಕ್ಷರಾದ ಬೇಕಾಗಿತ್ತು. ಆದರೆ ಅಲ್ಲಿನ ಚುನಾಯಿತ ಪ್ರತಿನಿಧಿಗಳು ಆ ಹೆಂಗಸನ್ನು ಸೂಚನೆ ಮಾಡುವುದಕ್ಕೆ ತಯಾರಿಲ್ಲ. ಆದ್ದರಿಂದ ಅದು ಹಾಗೆಯೇ ಉಂಟು. ಸರ್ಕಾರ ಅಲ್ಲಿ ಚುನಾವಣೆಯನ್ನು ಮಾಡುವುದಿಲ್ಲ. ಅಲ್ಲಿರುವ ಮಹಿಳೆಯನ್ನು ಅಧ್ಯಕ್ಷರನ್ನಾಗಿ ಮಾಡುವುದಿಲ್ಲ. ಇಂತಹ ಗಂಭೀರ ಪರಿಸ್ಥಿತಿ ಅಲ್ಲಿರುವಾಗ, ಚುನಾಯಿತ ಸದಸ್ಯರಿಗೆ ಏನು ಹಕ್ಕುಂಟು? ಬೇಕಾದರೆ ಓದಿ ಹೇಳುತ್ತೇನೆ.

ಅಧ್ಯಕ್ಷರು : ಅಗತ್ಯವಿಲ್ಲ, ಸಾಕು ಬಿಡಿ.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್‌ಸಚಿವರು): ಮಂಗಳೂರು ತಾಲ್ಲೂಕು ಉಳ್ಳಾಳ ವಿಧಾನಸಭಾ ಕ್ಷೇತ್ರದ ಬೊಳಿಯೂರು ಗ್ರಾಮ ಪಂಚಾಯಿತಿ ಅಧ್ಯಕ್ಷಸ್ಥಾನ ಪರಿಶಿಷ್ಟ ಪಂಗಡವರಿಗೆ ಮತ್ತು ಉಪಾಧ್ಯಕ್ಷಸ್ಥಾನವನ್ನು ಹಿಂದುಳಿದ ವರ್ಗದವರಿಗೆ ಮೀಸಲು ಇರಿಸಲಾಗಿದೆ. ದಿನಾಂಕ 18-3-94ರಂದು ಬೊಳಿಯೂರು ಗ್ರಾಮಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳ ಆಯ್ಕೆಯ ಬಗ್ಗೆ ಸಭೆ ಕರೆಯಲಾಗಿತ್ತು. ಆದರೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಯಾರಿಂದಲೂ ಸೂಚನೆ ಬಾರದೆ ಇದ್ದುದರಿಂದ ಸಭೆಯನ್ನು ಮುಂದೂಡಲಾಯಿತು. ದಿನಾಂಕ 13-9-94ರಂದು ಎರಡನೆಯ ಭಾರೀ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಸ್ಥಾನಗಳ ಆಯ್ಕೆ ಬಗ್ಗೆ ಸಭೆ ಕರೆಯಲಾಗಿತ್ತು. ಆದಿನ ಸಹ ಅಧ್ಯಕ್ಷ ಸ್ಥಾನಕ್ಕೆ ಯಾವ್ದೂ ಸೂಚನೆ ಬಂದಿರುವುದಿಲ್ಲ, ಮತ್ತು ಉಪಾಧ್ಯಕ್ಷರ ಸ್ಥಾನಕ್ಕೆ ಎರಡು ಸೂಚನೆಗಳು ಬಂದಿದ್ದು ಸಭೆಯಲ್ಲಿ ಕೋರಂ ಇಲ್ಲದ ಕಾರಣ ಸಭೆಯನ್ನು ಮುಂದೂಡಲಾಯಿತು. ಸದರಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಚುನಾವಣೆ ನಡೆಸಲು ಪುನಃ ಸಭೆಯನ್ನು ಕರೆಯಲು ಚುನಾವಣಾ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

(2) ಹಾಸನ ಜಿಲ್ಲೆಯಲ್ಲಿ ಅದರಲ್ಲೂ ಅರಕಲಗೂಡು ತಾಲ್ಲೂಕಿಗೆ ಕುಡಿಯುವ ನೀರಿಗಾಗಿ ಖರ್ಚು ಮಾಡಿದ ಹಣದ ಬಗ್ಗೆ

ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು) : ಮಾನ್ಯ ಅಧ್ಯಕ್ಷರೆ, ಕುಡಿಯುವ ನೀರಿನ ಸಮಸ್ಯೆಯ ನಿವಾರಣೆಗೆ ಕಳೆದ ಮೂರು ತಿಂಗಳಿನಿಂದ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಲಾಗಿರುವ ಹಣ ಎಷ್ಟು? ಆ ಪೈಕಿ ಯಾವ್ಯಾವ ತಾಲ್ಲೂಕಿಗೆ